## ಕರ್ನಾಟಕ ವಿಧಾನ ಪರಿಷತ್ತು

### ಮಾನ್ಯ ವಿಧಾನ ಪರಿಷತ್ತು ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಎಸ್.ಎಲ್ ಭೋಜೇಗೌಡ ಹಾಗೂ ಶ್ರೀ ಮಧು ಜಿ. ಮಾದೇಗೌಡ ಇವರುಗಳ ನಿಯಮ 72 ಕ್ಕೆ ಉತ್ತರಿಸುವ ಬಗ್ಗೆ.

**ಸೂಚನೆ:**

ಸಮಾಜ ಕಲ್ಯಾಣ ಇಲಾಖೆಯಡಿಯ ಕ್ರೈಸ್ ಅಧೀನದ ಖಾಯಂ ಸಿಬ್ಬಂದಿಗಳಿಗೆ ಡಿ.ಸಿ.ಆರ್.ಜಿ, ಜ್ಯೋತಿ ಸಂಜೀವಿನಿ ಸೌಲಭ್ಯ ನೀಡದೆ ಇರುವುದು, ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸುವುದು, ಪದವಿಪೂರ್ವ ಕಾಲೇಜುಗಳಲ್ಲಿ ಹಿಂದಿ ಉಪನ್ಯಾಸಕರ, ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ ಸೃಜನೆ, ನವೋದಯ ಮಾದರಿಯಲ್ಲಿ ಸಿಬ್ಬಂದಿಗಳಿಗೆ ಉಚಿತ ವಿದ್ಯುತ್/ ವಸತಿ ಗೃಹ, ಶೇ.10 ರಷ್ಟು ವಿಶೇಷ ಭತ್ಯೆ ನೀಡದೆ ಇರುವುದು. ಶಿಕ್ಷಕ/ಉಪನ್ಯಾಸಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ನೀಡದೆ ಇರುವುದು, ಹೋಬಳಿಗೊಂದು ವಸತಿ ಶಾಲೆ ಪ್ರಾರಂಭಿಸದೆ ಇರುವುದು ಹಾಗೂ ವಸತಿ ಶಿಕ್ಷಣ ನಿರ್ದೇಶನಾಲಯ ಸ್ಥಾಪನೆ ಮಾಡಿರುವುದಿಲ್ಲ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲೇ ಉಚಿತ ಸವಲತ್ತುಗಳನ್ನು ಒದಗಿಸದೆ ಇರುವುದು. ಈ ಎಲ್ಲಾ ಮೂಲಭೂತ ಸಮಸ್ಯೆಗಳಿಂದ ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಣಕ್ಕೆ ಅಡ್ಡಿ ಉಂಟಾಗುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

**ಡಿ. ಸಿ. ಆರ್. ಜಿ**

6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01-04-2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ: 23.06.2018 ರ ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ. ಈ ಆದೇಶವು ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ. ಆದುದರಿಂದ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆ ಹಿಂಬರಹ ನೀಡಿರುತ್ತದೆ.

ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ DCRG ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯವಾಗುವವರೆಗೆ ಸಂಘದ ಅಧೀನದ ಸೇವಾನಿರತ ಖಾಯಂ ಸಿಬ್ಬಂದಿಗಳು ಆಕಾಲಿಕ ಮರಣ ಹೊಂದಿದ್ದಲ್ಲಿ ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00/- ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ.

**ಜ್ಯೋತಿ ಸಂಜೀವಿನಿ :**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ

ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಅನುಷ್ಠಾನಗೊಳಿಸಲು ವಾರ್ಷಿಕವಾಗಿ ರೂ.4.5 ಕೋಟಿಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಒದಗಿಸಲಾಗುವ ನಿರ್ವಹಣಾ ವೆಚ್ಚದಿಂದ ಭರಿಸಿ ಪಾವತಿಸಲು ಅನುಮತಿ ನೀಡಿ ಆದೇಶಿಸಲಾಗಿದೆ. ಅದರಂತೆ ಕಾರ್ಯಕಾರಿ ನಿರ್ದೇಶಕರು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ ಬೆಂಗಳೂರು ರವರಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ವಿಸ್ತರಿಸಲು ಕೋರಿ ಪತ್ರ ಬರೆಯಲಾಗಿದೆ.

**ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸುವುದು.**

2019-20 ನೇ ಸಾಲಿನ ಅಯವ್ಯಯದಲ್ಲಿ ಘೋಷಿಸಿರುವಂತೆ 100 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಿ, ಪದವಿ ಪೂರ್ವ ಹಂತದಲ್ಲಿ ವಿಜ್ಞಾನ ಮತ್ತು ವಾಣಿಜ್ಯ ತರಗತಿಗಳನ್ನು ಪ್ರಾರಂಭಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಆರ್ಥಿಕ ಇಲಾಖೆಯು ಪ್ರಸ್ತಾವನೆಯನ್ನುಒಪ್ಪಿರುವುದಿಲ್ಲ.

**ಹಿಂದಿ ಭಾಷಾ ಉಪನ್ಯಾಸಕರ ಹುದ್ದೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿನ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ (Science Method) ತರಗತಿಗಳನ್ನು ನಡೆಸಲಾಗುತ್ತಿದ್ದು ಸಂಘದ ವಿಜ್ಞಾನ ಕಾಲೇಜುಗಳಿಗೆ ಕನ್ನಡ ಮತ್ತು ಆಂಗ್ಲಭಾಷಾ ವಿಷಯವನ್ನು ನಿಗಧಿಪಡಿಸಿ ಹುದ್ದೆಗಳನ್ನು ಮಂಜೂರು ಮಾಡಲಾಗಿರುತ್ತದೆ. ಹಿಂದಿ ವಿಷಯವನ್ನು ಭಾಷೆಯನ್ನಾಗಿ ಪರಿಗಣಿಸಿರುವುದಿಲ್ಲ. ಆದ್ದರಿಂದ ಹಿಂದಿ ಭಾಷಾ ಉಪನ್ಯಾಸಕರ ಹುದ್ದೆ ಮಂಜೂರಾಗಿರುವುದಿಲ್ಲ.

**ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆ**

ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಮಂಜೂರಾಗಿರುವುದಿಲ್ಲ. ಆದ್ದರಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಪದವಿ ಪೂರ್ವ ಕಾಲೇಜುಗಳಿಗೂ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡಿರುವುದಿಲ್ಲ

**ನವೋದಯ ಮಾದರಿಯಲ್ಲಿ ಸಿಬ್ಬಂಧಿಗಳಿಗೆ ಉಚಿತ ವಿದ್ಯುತ್ ವಸತಿ ಗೃಹ,**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 833 (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156, ಹಿಂದುಳಿದ ವರ್ಗ-174) ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, 638 ವಸತಿ ಶಾಲೆಗಳು ಸ್ವಂತ ಕಟ್ಟಡವನ್ನು ಹೊಂದಿದ್ದು, ಸ್ವಂತ ಕಟ್ಟಡ ಹೊಂದಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಲಾಗಿದೆ.

ಸನ್ಮಾನ್ಯ ಮುಖ್ಯಮಂತ್ರಿಗಳು ದಿನಾಂಕ:02-11-2023ರ ಟ್ವಿಟರ್ ಖಾತೆಯಲ್ಲಿ ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಕಲ್ಪಿಸಲು ಸೂಚಿಸಿರುವಂತೆ ಸಂಘದ ವಸತಿ ಶಾಲೆ/ಕಾಲೇಜುಗಳಿಗೂ ಸಹ ಈ ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.

**ಶೇ 10 ರಷ್ಟು ವಿಶೇಷ ಭತ್ಯೆ:-**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ಶೇ 10 ರಷ್ಟು ವಿಶೇಷ ಕ್ಯಾಂಪಸ್ ಭತ್ಯೆಯನ್ನು ಮಂಜೂರು ಮಾಡುವ ಬಗ್ಗೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಆರ್ಥಿಕ ಇಲಾಖೆಯು ವೇತನ ಆಯೋಗ ಅಥವಾ ತಜ್ಞರ ಸಮಿತಿಗಳ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ. ರಾಜ್ಯ ಸರ್ಕಾರವು ತನ್ನ ನೌಕರರಿಗೆ ಕೇಂದ್ರ ಸರ್ಕಾರದ ರೀತ್ಯ ವೇತನ ಪರಿಷ್ಕರಣೆ ಮಾಡಿರುವುದಿಲ್ಲ ಇದೊಂದು ಹೊಸದಾದ ಕ್ಯಾಂಪಸ್ ವಿಶೇಷ ಭತ್ಯೆಯಾಗಿದ್ದು, ಪ್ರಸಕ್ತ 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ. ಆದ್ದರಿಂದ ಖಾಯಂ ಸಿಬ್ಬಂದಿಗಳಿಗೆ ಶೇ.10 ರಷ್ಟು ವಿಶೇಷ ಕ್ಯಾಂಪಸ್ ಭತ್ಯೆಯನ್ನು ಮಂಜೂರು ಮಾಡುವಂತೆ ಕೋರಿ 7ನೇ ವೇತನ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

**ಶಿಕ್ಷಕ/ಉಪನ್ಯಾಸಕರಿಗೆ ಒಂದು ಹೆಚ್ಚುವರಿ ವೇತನ ಬಡ್ತಿ.**

ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರು/ಉಪನ್ಯಾಸಕರುಗಳಿಗೆ ಮಂಜೂರಾಗಿರುವ ಒಂದು ಹೆಚ್ಚುವರಿ ವೇತನ ಭತ್ಯೆಯನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಶಿಕ್ಷಕರಿಗೂ ವಿಸ್ತರಿಸುವ ಕುರಿತು ರಚಿಸಲಾದ ಶ್ರೀ ಕುಮಾರ್ ನಾಯಕ್, ಅಂದಿನ ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ವರದಿಯನ್ವಯ ಆರ್ಥಿಕ ಇಲಾಖೆಯನ್ನು ಕೋರಲಾಗಿ, ಆರ್ಥಿಕ ಇಲಾಖೆಯು ವಸತಿ ಶಾಲೆ ಶಿಕ್ಷಕರುಗಳ ಕರ್ತವ್ಯಗಳು ಮತ್ತು ಶಿಕ್ಷಣ ಇಲಾಖೆಯ ಶಿಕ್ಷಕರುಗಳ ಕರ್ತವ್ಯಗಳನ್ನು ಪರಸ್ಪರ ಹೋಲಿಸಲು ಬರುವುದಿಲ್ಲ. ಎರಡೂ ವೃಂದಗಳ ವೃಂದ ಮತ್ತು ನೇಮಕಾತಿ ನಿಯಮಗಳೂ ಬೇರೆ ಬೇರೆಯಾಗಿದ್ದು, ಒಂದರ ನಿಯಮವನ್ನು ಮತೊಂದಕ್ಕೆ ಹೋಲಿಸಿ ಅನ್ವಯಿಸಲು ನಿಯಮಗಳಲ್ಲಿ ಅವಕಾಶ ಇಲ್ಲವೆಂದು ತಿಳಿಸಿರುತ್ತದೆ. ಸಂಘದ ನೌಕರರಿಗೆ ಶ್ರೀ ಕುಮಾರ್ ನಾಯಕ್ ವರದಿಯನ್ವಯ ಒಂದು ಹೆಚ್ಚುವರಿ ವೇತನ ಭತ್ಯೆಯನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡುವಂತೆ ಕೋರಿ 7ನೇ ವೇತನ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.

**ಹೋಬಳಿಗೊಂದು ವಸತಿ ಶಾಲೆ ಪ್ರಾರಂಭಿಸುವ ಕುರಿತು.**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳು ಇಲ್ಲದಿರುವ ಹೋಬಳಿಯಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. ಪ್ರತಿ ಒಂದು ವಸತಿ ಶಾಲೆಯನ್ನು ಪ್ರಾರಂಭಿಸಲು ಆವರ್ತಕ ಮತ್ತು ಅನಾವರ್ತಕ ವೆಚ್ಚ ಸೇರಿ ರೂ.24,17,86,711/-ಗಳ ವೆಚ್ಚ ಭರಿಸಬೇಕಾಗಿರುತ್ತದೆ. ಆರ್ಥಿಕ ಇಲಾಖೆಯ ಸಹಮತಿ ಪಡೆದು, ಅನುದಾನದ ಲಭ್ಯತೆಯನುಸಾರ ಹಂತ ಹಂತವಾಗಿ ವಸತಿ ಶಾಲೆಯನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು

**ವಸತಿ ಶಿಕ್ಷಣ ನಿರ್ದೇಶನಾಲಯ ಸ್ಥಾಪನೆ.**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ 80ನೇ ಆಡಳಿತ ಮಂಡಳಿಯ ಸಭೆಯಲ್ಲಿ ವಿಷಯ ಮಂಡಿಸಿದ್ದು, ಸಭೆಯು ಅಂಗೀಕರಿಸಿರುತ್ತದೆ ಹಾಗೂ ಸದರಿ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

**ವಸತಿ ಶಾಲೆ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಸೌಲಭ್ಯಗಳು:-**

ಆಹಾರ ವೆಚ್ಚ, ಇತರೆ ವೆಚ್ಚಗಳು (ಟೂತ್ ಪೇಸ್ಟ್, ಬ್ರಷ್,ಎಣ್ಣೆ,ಇತ್ಯಾದಿ) ಕ್ಷೌರ ವೆಚ್ಚ,ನ್ಯಾಪ್ ಕಿನ್

ವೆಚ್ಚ, ಸಿದ್ಧಪಡಿಸಿದ ಸಮವಸ್ತ್ರ, ಶೂ, ಸಾಕ್ಸ್, ಟೈ, ಬೆಲ್ಟ್, ನೋಟ್ ಪುಸ್ತಕ ಲೇಖನ ಸಾಮಗ್ರಿಗಳು, ಪಠ್ಯ ಪುಸ್ತಕ, ಜಮಖಾನ, ಬೆಡ್‌ಶೀಟ್ (ಜಖಾರ್ಡ್) ಬೆಡ್‌ಸ್ಪ್ರೆಡ್, ವಿದ್ಯಾರ್ಥಿಗಳ ಕಲ್ಯಾಣ ನಿಧಿ, ಶಿಕ್ಷಕರ ಕಲ್ಯಾಣ ನಿಧಿ, ಶೈಕ್ಷಣಿಕ ಪ್ರವಾಸ, ಎಸ್.ಎಸ್.ಎಲ್.ಸಿ. ಅಂತಿಮ ವಾರ್ಷಿಕ ಪರೀಕ್ಷಾ ಶುಲ್ಕ, Carrier Counselling AND Personality development training ಮತ್ತು ವಿದ್ಯಾರ್ಥಿನಿಯರ ಸ್ವಯಂ ರಕ್ಷಣಾ ತರಬೇತಿ ಹಾಗೂ ಪ್ರಥಮ ಮತ್ತು ದ್ವಿತೀಯ ಪಿ.ಯು.ಸಿ. ವಿದ್ಯಾರ್ಥಿಗಳಿಗೆ JEE/NEET ತರಬೇತಿ ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ಈ ಎಲ್ಲಾ ಸೌಲಭ್ಯಗಳನ್ನು ಶಿಕ್ಷಕರುಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಸಕಾಲದಲ್ಲಿ ಒದಗಿಸಲಾಗುತ್ತಿದೆ.

ಕರ್ನಾಟಕ ವಸತಿ ಶಿಕ್ಷಣಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿದ್ದು, ವಿದ್ಯಾರ್ಥಿಗಳ ಗುಣಾತ್ಮಕ ಶಿಕ್ಷಣಕ್ಕೆ ಅಡ್ಡಿ ಉಂಟಾಗುತ್ತಿಲ್ಲ ಹಾಗೂ ಸದರಿ ವಸತಿ ಶಾಲೆ/ಕಾಲೇಜುಗಳ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ 2022-23 ನೇ ಸಾಲಿನ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ ತರಗತಿಗಳ ಪರೀಕ್ಷೆ ಫಲಿತಾಂಶದ ಈ ಕೆಳಕಂಡಂತಿದೆ.

**2022-23 ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ ಫಲಿತಾಂಶದ ಸಂಕ್ಷಿಪ್ತ ಮಾಹಿತಿ**

- 793 ವಸತಿ ಶಾಲೆಗಳ ಒಟ್ಟು 35174 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 34590 ವಿದ್ಯಾರ್ಥಿಗಳು (ಶೇ.98.34) ಉತ್ತೀರ್ಣರಾಗಿದ್ದಾರೆ.
- 584 ವಿದ್ಯಾರ್ಥಿಗಳು ಅನುತ್ತೀರ್ಣರಾಗಿದ್ದು, ಒಂದು ವಿಷಯದಲ್ಲಿ 407 (ಶೇ.70) ವಿದ್ಯಾರ್ಥಿಗಳು ಅನುತ್ತೀರ್ಣರಾಗಿರುತ್ತಾರೆ.
- 33494 (ಶೇ.97.00) ವಿದ್ಯಾರ್ಥಿಗಳು ಡಿಸ್ಟಿಂಗ್ಷನ್ ಮತ್ತು ಪ್ರಥಮ ದರ್ಜೆ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.
- 557 (ಶೇ.70 ರಷ್ಟು)ವಸತಿ ಶಾಲೆಗಳಲ್ಲಿ ಶೇ.100% ಫಲಿತಾಂಶವಿದೆ.
- ವಿವಿಧ ವಿಷಯಗಳಲ್ಲಿ 6837 ವಿದ್ಯಾರ್ಥಿಗಳು ನೂರಕ್ಕೆ ನೂರು ಅಂಕಗಳನ್ನು ಪಡೆದಿರುತ್ತಾರೆ.
- ಎಲ್ಲಾ ವಿದ್ಯಾರ್ಥಿಗಳ ಎಲ್ಲಾ ವಿಷಯಗಳಲ್ಲಿ ಸರಾಸರಿ ಸ್ಕೋರ್ 81.76 ರಷ್ಟಿದೆ ಹಾಗೂ ಎಲ್ಲಾ ವಿದ್ಯಾರ್ಥಿಗಳ ಸರಾಸರಿ ಅಂಕ ಗಳಿಕೆ -511 ಆಗಿದೆ.
- 2022-23 ನೇ ಸಾಲಿನಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಎಲ್ಲಾ ಶಾಲೆಗಳು 'ಎ' ಶ್ರೇಣಿಯಲ್ಲಿದ್ದು, ಎಲ್ಲಾ ಕ್ರೈಸ್ ವಸತಿ ಶಾಲೆಗಳ ಸರಾಸರಿ Quality weightage Percentage 91.45% ಆಗಿರುತ್ತದೆ.

**22-23ನೇ ಸಾಲಿನ ದ್ವಿತೀಯ ಪಿ.ಯು.ಸಿ ಫಲಿತಾಂಶದ ಮುಖ್ಯಾಂಶಗಳು:**

- ರಾಜ್ಯದ ಸರಾಸರಿ ಫಲಿತಾಂಶ ಶೇ. 78.97 ರಷ್ಟಿದ್ದು KREIS ವ್ಯಾಪ್ತಿಯ 79 ಪದವಿ ಪೂರ್ವ ಕಾಲೇಜುಗಳ ಒಟ್ಟಾರೆ ಫಲಿತಾಂಶ ಶೇ.95 ರಷ್ಟಿದೆ. ಶೇ.16.03 ರಷ್ಟು ಹೆಚ್ಚಾಗಿರುತ್ತದೆ.
- ಕ್ರೈಸ್‌ನ ಶೇ.92.44 ವಿದ್ಯಾರ್ಥಿಗಳು ಅತ್ಯುನ್ನತ ಮತ್ತು ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ.

- ಶೇ. 100 ರಷ್ಟು ಫಲಿತಾಂಶ ಪಡೆದ KREIS ಕಾಲೇಜುಗಳ ಸಂಖ್ಯೆ – 27
- ವಿದ್ಯಾರ್ಥಿಗಳ ಸರಾಸರಿ ಸ್ಕೋರ್: 76.41

ಸಕಇ 59 ಎಂಡಿಎಸ್ 2024

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು